ಸೂಕ್ತವಾದ ಮನೆಗಳನ್ನು ನಿರ್ಮಿಸಲು ಸಾಧ್ಯವಾಗುವುದಿಲ್ಲವೆಂದು, ಇದನ್ನು ರೂ. 1,000,00.00ಕ್ಕೆ ಹೆಚ್ಚಿಸಬೇಕೆಂದು ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದೊಂದಿಗೆ ಸಮಾಲೋಚಿಸಲಾಗಿದೆ. ಈಗ ಅವರು ಅಂತಹ ಮನೆಗಳ ಘಟಕ ವೆಚ್ಚವನ್ನು ರೂ. 50,000.00ದಿಂದ ರೂ. 1,000,000ಕ್ಕೆ ಹೆಚ್ಚಿಸಲು ಸಹಮತಿ ನೀಡಿ, ಕೇಂದ್ರ ಸರ್ಕಾರದಿಂದ 75% ಅನುದಾನ ನೀಡಲು ಒಪ್ಪಿರುತ್ತಾರೆ. ಆ ಮೇರೆಗೆ ರಾಜ್ಯ ಸರ್ಕಾರ ಘಟಕ ವೆಚ್ಚವನ್ನು ರೂ.50,000.00 ದಿಂದ ರೂ.1,000,00.00ಕ್ಕೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ. ರಾಜ್ಯ ಸರ್ಕಾರ 25% ಪ್ರಮಾಣದಲ್ಲಿ ವೆಚ್ಚ ಭರಿಸುತ್ತಿದೆ. ಅದರಂತೆ ಮನೆಗಳ ನಿರ್ಮಾಣವನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು.

ಇ) ಎರಡನೇ ಹಾಗೂ ಅಂತಿಮ ಕಂತಿನ ರೂ. 2320.25 ಲಕ್ಷಗಳ ಮೊತ್ತದ ಅನುದಾನವನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ.

ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರದಲ್ಲಿ ಸಮುದಾಯ ಭವನ ನಿರ್ಮಾಣ

55 (385) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕುಣಿಗಲ್ ತಾಲ್ಲೂಕಿನ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿರುವ ಪರಿಶಿಷ್ಟ ಜನಾಂಗದ ಕಾಲೋನಿಗಳಲ್ಲಿ ಸಮುದಾಯ ಭವನಗಳ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಪರಿಶಿಷ್ಟ ಜನಾಂಗ ವಾಸಿಸುತ್ತಿರುವ ಪ್ರದೇಶಗಳಲ್ಲಿ ಈ ಭವನಗಳನ್ನು ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

56(392) ಶ್ರೀ ಪಾಟೀಲ್ ಎ. ಎಸ್. (ನಡಹಳ್ಳಿ) (ದೇವರ ಹಿಪ್ಪರಗಿ): ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?